**<u>ಸಾಕ್ಷಿಗೆ ದಿನಾಂಕಃ 04.02.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತುಃ</u>**
**<u>ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ ಶ್ರೀಮತಿ ಅಂಬಿಕಾ ಅವರಿಂದಃ</u>**

1) ನಾನು ಈ ಪ್ರಕರಣದಲ್ಲಿ ಸಾಕ್ಷಿದಾರನಾಗಿದ್ದೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನಮ್ಮ ವಕೀಲರು ಸಿದ್ಧಪಡಿಸಿದ್ದಾರೆ.

2) ನ್ಯಾಯಾಲಯವು ಕಳುಹಿಸಿದ್ದ ಸಮನ್ಸ್ ನಲ್ಲಿ ನಮೂದು ಮಾಡಿದ್ದಂತಹ ದಾಖಲೆಗಳನ್ನು ನಾನು ಈ ದಿನ ನ್ಯಾಯಾಲಯದ ಮುಂದೆ ಹಾಜರುಪಡಿಸಿದ್ದೇನೆ. ಸಾಕ್ಷಿದಾರರು ಹಾಜರು ಮಾಡಿದ ದಾಖಲಾತಿಗಳನ್ನು ಈ ಕೆಳಕಂಡಂತೆ ನಿಶಾನೆಗಳನ್ನಾಗಿ ಗುರುತಿಸಲಾಯಿತು.

3) ಅನುಮತಿ ಪತ್ರವನ್ನು **ನಿ.ಪಿ.20** ಎಂದು ಗುರುತಿಸಿದೆ.

4) **Manipal Hospital** ನಲ್ಲಿ ಇಟ್ಟಿರುವಂತಹ ಪೋಲೀಸ್ ಇಂಟಿಮೇಶನ್ ಹಾಗೂ ಎಂಎಲ್‌ಸಿ ರಿಜಿಸ್ಟರ್ ಮೂಲ ದಾಖಲೆಗಳನ್ನು

ಮತ್ತು ಇದೇ ದಾಖಲೆಗಳಲ್ಲಿ ದಿನಾಂಕ **09.10.2024** ರಂದು ನಮೂದು ಆಗಿರುವಂತಹ ವಿವರಗಳ ಹಾಳೆಗಳ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದಾರೆ. ಸದರಿ ಮೂಲ ದಾಖಲೆಗಳನ್ನು ಮತ್ತು ದೃಢೀಕೃತ ಪ್ರತಿಗಳನ್ನು ಹೋಲಿಕೆ ಮಾಡಿ ನೋಡಲಾಗಿ ಈ ಮೂಲ ದಾಖಲೆಗಳನ್ನು ಆಧಾರವಾಗಿ ಇಟ್ಟುಕೊಂಡು ಯಾಂತ್ರಿಕ ಸಹಾಯದಿಂದ ಈ ದೃಢೀಕೃತ ಪ್ರತಿಗಳನ್ನು ಸಿದ್ಧಪಡಿಸಿದ್ದಾರೆ ಎಂದು ಕಂಡು ಬರುತ್ತದೆ. ಆದ ಕಾರಣದಿಂದ ಸದರಿ ದೃಢೀಕೃತ ಪ್ರತಿಗಳನ್ನು ನಿ.ಪಿ.**21** ಮತ್ತು ನಿ.ಪಿ.**22** ಎಂದು ಗುರುತಿಸಿದೆ ಮತ್ತು ಮೂಲ ದಾಖಲೆಗಳನ್ನು ಈ ಸಾಕ್ಷಿದಾರರಿಗೆ ವಾಪಸ್ಸು ನೀಡಿದೆ.

5) ಓರ್ವ ಲಕ್ಷ್ಮಿ ಸಿರೀಶ ಎಂಬ ವ್ಯಕ್ತಿಯು ನಮ್ಮ ಸಂಸ್ಥೆಗೆ ಯಾವಾಗ ದಾಖಲು ಆಗಿದ್ದಾರೆ ಮತ್ತು ಅವರಿಗೆ ಯಾವ ರೀತಿಯ ಗಾಯಗಳು ಆಗಿದ್ದವು ಮತ್ತು ಆಕೆಗೆ ಯಾವ ರೀತಿಯ ಚಿಕಿತ್ಸೆಯನ್ನು ಕೊಡಲಾಗಿದೆ ಎಂಬ ಎಲ್ಲಾ ಮಾಹಿತಿಗಳನ್ನು ಒಳಗೊಂಡಿರುವಂತಹ ಒಂದು ಕಡತ/ಫೈಲ್ ಹಾಜರುಪಡಿಸಿದ್ದು ಅದನ್ನು ನಿ.ಪಿ.**23** ಎಂದು ಗುರುತಿಸಿದೆ.

6) **1 X-Ray Film** ಅನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.**24** ಎಂದು ಗುರುತಿಸಿದೆ.

**<u>ಪಾಟೀ ಸವಾಲು: ಎದುರುದಾರರ ಪರ ವಕೀಲರಿಂದಃ</u>**

ಸದರಿ ಎದುರುದಾರರು ಮತ್ತು ಅವರ ಪರ ವಕೀಲರು ಹಾಜರಿಲ್ಲ, ಆದ ಕಾರಣದಿಂದ ಯಾವುದೇ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**<u>ಮರು ವಿಚಾರಣೆಃ ಇಲ್ಲ.</u>**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.